# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 603

ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು.

ಉತ್ತರಿಸುವ ದಿನಾಂಕ : 20.02.2024

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅವಿಭಾಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ಮರಗಳಿಗೆ ಎಲೆ ಚುಕ್ಕೆ ರೋಗದ ಹಾವಳಿಯಿಂದ ರೈತರು ನಷ್ಟ ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ರೋಗಬಾಧಿತ ತೋಟದ ರೈತ ಕುಟುಂಬಗಳಿಗೆ ಬೆಳೆ ಪರಿಹಾರ ನೀಡಲಾಗಿದೆಯೇ; | ತೋಟಗಾರಿಕೆ ಇಲಾಖೆಯಲ್ಲಿ ಬೆಳೆ ಪರಿಹಾರಕ್ಕೆ ಯಾವುದೇ ಕಾರ್ಯಕ್ರಮ ಇರುವುದಿಲ್ಲ.<br>ಅಡಿಕೆ ಎಲೆ ಚುಕ್ಕೆ ರೋಗದಿಂದ ಬಾಧಿತ ತೋಟಗಳ ನಿಯಂತ್ರಣಕ್ಕೆ ಇಲಾಖಾ ವತಿಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ.<br>1. ಅಡಿಕೆ ಬೆಳೆಗಾರರಿಗೆ ಎಲೆ ಚುಕ್ಕೆ ರೋಗದ ನಿಯಂತ್ರಣೆಗಾಗಿ ಪ್ರತಿ ಫಲಾನುಭವಿಗೆ ಪ್ರತಿ ಹೆಕ್ಟೇರ್ ಗೆ ರೂ.4000.00 ಗಳಂತೆ 1.5 ಹೆಕ್ಟೇರ್ ವರೆಗೆ ರೂ.6000/- ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು ನೀಡಲಾಗುತ್ತಿದೆ. ಈ ಕಾರ್ಯಕ್ರಮದಡಿ 2023-24ನೇ ಸಾಲಿನಲ್ಲಿ ಅವಿಭಾಜಿತ ದಕ್ಷಿಣ ಕನ್ನಡ ಜಿಲ್ಲೆಯ 500 ಹೆಕ್ಟೇರ್ ಪ್ರದೇಶಕ್ಕೆ ರೂ. 20.00ಲಕ್ಷ ವಿನಿಯೋಗಿಸಿ ಸಸ್ಯ ಸಂರಕ್ಷಣಾ ಔಷಧಿಗಳನ್ನು ಉಚಿತವಾಗಿ ನೀಡಲಾಗಿರುತ್ತದೆ.<br>2. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣೆ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಗೆ ಪ್ರಸಕ್ತ ಸಾಲಿನಲ್ಲಿ ರೂ.43.61 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಸಂಶೋಧನೆಯು ಪ್ರಗತಿಯಲ್ಲಿರುತ್ತದೆ.<br>3. ಅಡಿಕೆ ಬೆಳೆಗಾರರಿಗೆ ಅಡಿಕೆ ಬೆಳೆಯ ಕಟಾವು ಹಾಗೂ ಸಿಂಪರಣೆಗಾಗಿ(ದೋಟಿ) ಖರೀದಿಸಲು ಕೃಷಿ ಯಾಂತ್ರೀಕರಣ ಯೋಜನೆಯಡಿ ಸಾಮಾನ್ಯ ವರ್ಗದವರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಅವಿಭಾಜಿತ ದಕ್ಷಿಣ |
| ಇ) | ಬೆಳೆ ಪರಿಹಾರಕ್ಕೆ ರಾಜ್ಯ ಸರ್ಕಾರವು ಬಿಡುಗಡೆಗೊಳಿಸಿದ ಪರಿಹಾರದ ಮೊತ್ತವೆಷ್ಟು;(ಅಂಕಿ ಅಂಶದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು). | |

| | | |
|---|---|---|
| | | ಕನ್ನಡ ಜಿಲ್ಲೆಯ 317 ಫಲಾನುಭವಿಗಳಿಗೆ ಈವರೆಗೂ ರೂ.83.80 ಲಕ್ಷಗಳ ಸಹಾಯಧನ ನೀಡಲಾಗಿದೆ.<br>4. ಪ್ರಮುಖ ಅಡಿಕೆ ಬೆಳೆಯುವ ಜಿಲ್ಲೆಗಳಲ್ಲಿ ಒಟ್ಟು 53977 ಹೆಕ್ಟೇರ್ ಪ್ರದೇಶದಲ್ಲಿ ಎಲೆ ಚುಕ್ಕೆ ರೋಗದ ನಿಯಂತ್ರಣೆಗೆ ರೂ. 21.50 ಕೋಟಿಗಳ ಅನುದಾನದ ಅವಶ್ಯಕತೆಯಿದ್ದು, ಈ ಸಂಬಂಧಿತ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br>5. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣೆಗೆ ಅಗತ್ಯವಿರುವ ಸಸ್ಯ ಸಂರಕ್ಷಣಾ ಔಷಧಿಗಳು ಹಾಗೂ ಸಿಂಪರಣೆ ವೆಚ್ಚ, ತೋಟಗಳ ನೈರ್ಮಲೀಕರಣ ಹಾಗೂ ಪೋಷಕಾಂಶಗಳ ನಿರ್ವಹಣೆ ಕುರಿತಾದ ಅರಿವು ಮೂಡಿಸುವ ಕಾರ್ಯಕ್ರಮಗಳು, ಉತ್ತಮ ತೋಟಗಾರಿಕೆ ಬೇಸಾಯ ಪದ್ಧತಿಗಳ ಅಳವಡಿಕೆ, ಪ್ರಾತ್ಯಕ್ಷತೆಗಳು ಇತ್ಯಾದಿಗಳಿಗಾಗಿ ರೂ. 225.73 ಕೋಟಿಗಳ ಪ್ರಸ್ತಾವನೆಯನ್ನು ರೂಪಿಸಿ ಕೇಂದ್ರ ಸಂಸ್ಥೆಯಾದ CPCRI ಕಾಸರಗೋಡು ರವರ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಈ ಪ್ರಸ್ತಾವನೆಯ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲುದಾರಿಕೆ ಮತ್ತು ವರ್ಷವಾರು ಅನುದಾನದ ಹಂಚಿಕೆ ಕುರಿತು ಕೇಂದ್ರ ಸರ್ಕಾರವು ಮಾಹಿತಿಯನ್ನು ಕೋರಿದ್ದು, ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br>6. ರೋಗದ ನಿಯಂತ್ರಣೆಯ ಕುರಿತು ರಾಷ್ಟ್ರೀಯ ವಿಜ್ಞಾನಿಕ ಸಮಿತಿ ಹಾಗೂ ಇಲಾಖಾ ಅಧಿಕಾರಿಗಳು ಅಡಿಕೆ ಎಲೆಚುಕ್ಕೆ ರೋಗ ಬಾಧಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಹಾರೋಪಾಯಗಳನ್ನು ಹಾಗೂ ಪ್ರಾತ್ಯಕ್ಷತೆಗಳನ್ನು ಕೈಗೊಳ್ಳಲಾಗಿರುತ್ತದೆ. |

HORTI 18 HEG 2024

**(ಎಸ್.ಎಸ್.ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು